**All India Radio: Bangalore**
**Regional Bulletin In Kannada**
**30.05.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.05.2026 / 2.30 p.m.**
**<><><><>**

ಮುಖ್ಯಾಂಶಗಳು

1. ಇಂದು ಸಂಜೆ ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ; ನೂತನ ನಾಯಕನ ಆಯ್ಕೆ ಕುರಿತು ಹಕ್ಕು ಮಂಡನೆ
2. ಸಾರ್ವಜನಿಕರ ಅಹವಾಲು ಆಲಿಸಿದ ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ; ಜನರ ಸಮಸ್ಯೆಗಳನ್ನು ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚನೆ
3. ಯಾದಗಿರಿ ಲುಂಬಿನಿ ವನಕ್ಕೆ ಉಪ ಲೋಕಾಯುಕ್ತ ಕೆ.ಎನ್.ಫಣೀಂದ್ರ ಭೇಟಿ ; ಸ್ವಚ್ಛತೆ ಕಾಪಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ
4. ಆಕಾಶವಾಣಿಗೆ ೯೦ರ ಸಂಭ್ರಮಾಚರಣೆ ಹಿನ್ನೆಲೆ ; ಇಂದು ಸಂಜೆ ಬೆಂಗಳೂರಿನಲ್ಲಿ ಸಂಗೀತ ಕಾರ್ಯಕ್ರಮ

<><><><>

ಕರ್ನಾಟಕ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಇಂದು ಸಂಜೆ ಬೆಂಗಳೂರಿನ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿದೆ. ಸಭೆಯ ಅಧ್ಯಕ್ಷತೆಯನ್ನು ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಲಿದ್ದಾರೆ. ಸಭೆಯಲ್ಲಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ವಿಧಾನಪರಿಷತ್ತಿನಲ್ಲಿ ಸಭಾ ನಾಯಕ ಎನ್.ಎಸ್.ಬೋಸರಾಜು ಸೇರಿದಂತೆ ಕಾಂಗ್ರೆಸ್‌ನ ಎಲ್ಲಾ ಶಾಸಕರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ. ಈ ಸಭೆಯಲ್ಲಿ ನೂತನ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ನಡೆಯಲಿದ್ದು, ಅವರು ರಾಜ್ಯಪಾಲರನ್ನು ಭೇಟಿ ಮಾಡಿ ಸರ್ಕಾರದ ರಚನೆಗೆ ಹಕ್ಕು ಮಂಡಿಸಲಿದ್ದಾರೆ. ಇಂದು ಬೆಳಗ್ಗೆ ಕಾಂಗ್ರೆಸ್ ನಾಯಕ ಡಿ.ಕೆ. ಶಿವಕುಮಾರ್ ಅವರು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಭೇಟಿಯಾದರು.

<><><><>

ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ಬೆಳಿಗ್ಗೆ ತಮ್ಮ ಗೃಹ ಕಚೇರಿ 'ಕಾವೇರಿ'ಯಲ್ಲಿ ಜನತಾ ದರ್ಶನ ನಡೆಸಿದರು. ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಬೇರೆ ಬೇರೆ ಊರುಗಳಿಂದ ಆಗಮಿಸಿದ್ದ ಜನರು, ಹಂಗಾಮಿ ಮುಖ್ಯಮಂತ್ರಿಯವರಿಗೆ ತಮ್ಮ ಕುಂದು-ಕೊರತೆಗಳನ್ನು ಪರಿಹರಿಸುವಂತೆ ನಿವೇದಿಸಿಕೊಂಡರು. ಜನರ ಅಹವಾಲುಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಗಮನಹರಿಸಿ; ಪರಿಹರಿಸುವ ಕೆಲಸ ಮಾಡಬೇಕೆಂದು ಸಿದ್ದರಾಮಯ್ಯ ಸೂಚಿಸಿದರು.

<><><><>

ಕರ್ನಾಟಕದ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಇಂದು ಯಾದಗಿರಿ ನಗರದ ಲುಂಬಿನಿ ವನಕ್ಕೆ ಭೇಟಿ ನೀಡಿ, ಅಲ್ಲಿನ ಸ್ಥಿತಿಗತಿಗಳ ಪರಿಶೀಲನೆ ನಡೆಸಿದರು. ಲುಂಬಿನಿ ವನದಲ್ಲಿ ಕುಡಿಯುವ ನೀರು, ಶೌಚಾಲಯ, ಸ್ವಚ್ಛತೆ ಇನ್ನಿತರ ವಿಷಯಗಳ ಕುರಿತಂತೆ ಅಧಿಕಾರಿಗಳೊಂದಿಗೆ ಚರ್ಚಿಸಿದರಲ್ಲದೆ, ವನವನ್ನು ಸ್ವಚ್ಛವಾಗಿ ಇಟ್ಟುಕೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಬೇಕು ಎಂದು ಸೂಚಿಸಿದರು. ಭೇಟಿ ವೇಳೆ ಲುಂಬಿನಿ ವನದಲ್ಲಿ ಯೋಗಾಭ್ಯಾಸ ಮಾಡುತ್ತಿದ್ದ ಜನರು, ಉಪಲೋಕಾಯುಕ್ತರಿಗೆ, ಗಾರ್ಡನ್‌ಗೆ ಹೊರಗಡೆಯಿಂದ ಕೊಳಚೆ ನೀರು ಬರುತ್ತಿದೆ. ಕೂಡಲೇ ಅದನ್ನು ಸರಿಪಡಿಸಬೇಕು. ಮೂಲಸೌಕರ್ಯವಿಲ್ಲದೆ ನಲುಗುತ್ತಿದೆ. ಸ್ವಚ್ಛತೆಗಾಗಿ ಯಾವ ಸಿಬ್ಬಂದಿಯೂ ಬರುವುದಿಲ್ಲವೆಂದು ದೂರು ನೀಡಿದರು. ತಕ್ಷಣವೇ ಉಪಲೋಕಾಯುಕ್ತರು ಸ್ಥಳದಲ್ಲಿದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡರು. ಮುಂದಿನ ದಿನಗಳಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಣೆ ಮಾಡಬೇಕೆಂದು ನಿರ್ದೇಶನ ನೀಡಿದರು.

<><><><>

ಶಿವಮೊಗ್ಗ ಜಿಲ್ಲೆ ಹೊಸನಗರ ತಾಲ್ಲೂಕಿನ ಹುಲಿಕಲ್ ಘಾಟಿಯಲ್ಲಿ ನಡೆಯುತ್ತಿರುವ ರಸ್ತೆ ಕಾಮಗಾರಿಯನ್ನು ಸಂಸದ ಬಿ.ವೈ.ರಾಘವೇಂದ್ರ ಪರಿಶೀಲನೆ ನಡೆಸಿದರು. ಘಾಟಿಯಲ್ಲಿನ ದುರಸ್ತಿ ಕಾಮಗಾರಿಯನ್ನ ಶೀಘ್ರದಲ್ಲೇ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸಂಸದರು ಖಡಕ್ ಸೂಚನೆ ನೀಡಿದರು. ಈ ವೇಳೆ ಹುಲಿಕಲ್ ಘಾಟಿಯಲ್ಲಿ ಸಂಭವಿಸಿದ ಭೂಕುಸಿತದ ದುರಂತದಲ್ಲಿ ಮೃತಪಟ್ಟವರು ಮನೆಗೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಈ ವೇಳೆ ಶಾಸಕ ಆರಗ ಜ್ಞಾನೇಂದ್ರ ಪರಿಹಾರದ ಚೆಕ್ ನ್ನು ಹಸ್ತಾಂತರ ಮಾಡಿದರು.

<><><><>

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, ರಾಜ್ಯದಲ್ಲಿ ೨೦೨೬ರ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಕೈಗೊಳ್ಳಲಾಗುತ್ತಿದೆ.  ಕರ್ನಾಟಕದಲ್ಲಿ ಈ ಪ್ರಕ್ರಿಯೆಯನ್ನು ಮೂರು ಹಂತದಲ್ಲಿ ನಡೆಸಲಾಗುತ್ತಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯಲ್ಲಿ ಮೇ ೨೫ರ ಅಂಕಿ-ಅಂಶಗಳ ಪ್ರಕಾರ ಒಟ್ಟು ೧೨ ಲಕ್ಷದ ೯೪ ಸಾವಿರದ ೭೨೪ ಮತದಾರರಿದ್ದು, ಇವರೆಲ್ಲರನ್ನೂ ಈ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಒಳಪಡಿಸಲಾಗುವುದು. ಜಿಲ್ಲೆಯಾದ್ಯಂತ ಈ ಕಾರ್ಯವನ್ನು ಯಶಸ್ವಿಯಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಒಟ್ಟು ೧ ಸಾವಿರದ ೫೩೮ ಮತಗಟ್ಟೆ ಹಂತದ ಅಧಿಕಾರಿಗಳನ್ನು ನಿಯೋಜಿಸಲಾಗಿದೆ ಎಂದು ಹೇಳಿದ್ದಾರೆ.

<><><><>

ಆಕಾಶವಾಣಿಗೆ ಈಗ ೯೦ರ ಸಂಭ್ರಮ. ಈ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ಇಂದು ಬೆಂಗಳೂರಿನ ಗಾಯನ ಸಮಾಜದಲ್ಲಿ ಸಂಜೆ ೬ ಗಂಟೆಗೆ ಸಂಗೀತ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮೊದಲ ಗೋಷ್ಠಿಯಲ್ಲಿ ಆಕಾಶವಾಣಿ ಸಾಹಿತ್ಯ ಕುರಿತು ಹಿರಿಯ ಸಾಹಿತಿ ಬಸವರಾಜ ಸಾದರ, ಆಕಾಶವಾಣಿ ಸಂಗೀತ ಕುರಿತು ಸಂಗೀತ ತಜ್ಞ ಡಾ.ಎನ್.ರಘು, ಆಕಾಶವಾಣಿ ನಾಟಕಗಳ ಕುರಿತು ಡಾ.ವಿದ್ಯಾ ಮಾತನಾಡಲಿದ್ದಾರೆ. ಬಳಿಕ, ಕರ್ನಾಟಕ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ನಡೆಯಲಿದ್ದು, ಹೆಸರಾಂತ ಕಲಾವಿದ ರಮಣಬಾಲಚಂದ್ರನ್ ಅವರಿಂದ ವೀಣಾ ವಾದನ

ನಡೆಯಲಿದೆ. ಕಾರ್ಯಕ್ರಮದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಅಯೇಶಾ ಖಾನಂ, ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

<><><>

ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ಗೃಹಲಕ್ಷ್ಮಿ ಹಣ ಮೃತರ ಬ್ಯಾಂಕ್ ಖಾತೆಗಳಿಗೆ ಜಮೆ ಆಗುತ್ತಿರುವುದನ್ನು ಪತ್ತೆ ಹಚ್ಚಿ ಅಂತಹ ಖಾತೆಗಳಿಗೆ ಹಣ ಜಮೆ ಆಗುವುದನ್ನು ಸ್ಥಗಿತಗೊಳಿಸಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ರಾಜಣ್ಣ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಸಭಾಂಗಣಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರತಿ ತಿಂಗಳು ೨೦೦ ಕೋಟಿ ರೂಪಾಯಿ ಗೃಹಲಕ್ಷ್ಮಿ ಹಣ ಮೃತರ ಬ್ಯಾಂಕ್ ಖಾತೆಗೆ ಜಮೆ ಆಗುತ್ತಿದೆ. ಈಗಾಗಲೇ ರಾಜ್ಯಮಟ್ಟದ ಸಭೆಯಲ್ಲಿ ಚರ್ಚಿಸಿ ಎಲ್ಲಾ ಜಿಲ್ಲೆಗಳಲ್ಲಿ ಮೃತರ ಖಾತೆಗಳ ಬಗ್ಗೆ ಮಾಹಿತಿ ಕಲೆ ಹಾಕಿ, ಸ್ಥಗಿತಗೊಳಿಸಲು ಕ್ರಮ ವಹಿಸಬೇಕು ಎಂದು ತೀರ್ಮಾನಿಸಲಾಗಿದೆ ತಿಳಿಸಿದ್ದಾರೆ.

<><><>

ಬೆಂಗಳೂರಿನ ಬನ್ನೇರಘಟ್ಟ ರಸ್ತೆಯಲ್ಲಿ ಜಲಾವೃತವಾಗದಂತೆ ಯೋಜನೆ ರೂಪಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಪ್ರವಾಹ ಪೀಡಿತ ಪ್ರದೇಶಗಳು ಹಾಗೂ ಇತರೆ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಬನ್ನೇರಘಟ್ಟ ರಸ್ತೆಯ ರೈನ್‌ಬೋ ಮಕ್ಕಳ ಆಸ್ಪತ್ರೆ ಬಳಿ ಮಳೆಯಾದಾಗಲೆಲ್ಲಾ ಜಲಾವೃತವಾಗುತ್ತಿದ್ದು, ವಾಹನ ಸಂಚಾರಕ್ಕೆ ಸಾಕಷ್ಟು ತೊಂದರೆಯಾಗುತ್ತಿದೆ. ಈ ಸಂಬಂಧ ಜಲಾವೃತ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

<><><>

ಚಿಕ್ಕಮಗಳೂರು  ಜಿಲ್ಲೆಯ ಹಲವೆಡೆ ತಡರಾತ್ರಿ ಸುರಿದ ಮಳೆಗೆ ಹಲವೆಡೆ ಹಾನಿಯುಂಟಾಗಿದೆ. ಚಿಕ್ಕಮಗಳೂರು ನಗರ, ಕೈಮರ, ಮಲ್ಲೇನಹಳ್ಳಿ, ಮುಳ್ಳಯ್ಯನಗಿರಿ ಶ್ರೇಣಿ ಸೇರಿ ಹಲವೆಡೆ ಮಳೆಯಾಗಿದೆ. ಗಾಳಿ ಮಳೆಯಿಂದ ಚಿಕ್ಕಮಗಳೂರು ನಗರದ ಹೊಸಮನೆ ಬಡಾವಣೆ, ಕೋಟೆ ಭಾಗದಲ್ಲಿ ೧೦ಕ್ಕೂ ಹೆಚ್ಚು ವಿದ್ಯುತ್ ಕಂಬಗಳು, ಕೆಲವೆಡೆ ಮರಗಳು ಉರುಳಿಬಿದ್ದಿವೆ. ಮರ ಉರುಳಿದ ಪರಿಣಾಮ ಚಿಕ್ಕಮಗಳೂರು ನಗರದ ಪ್ರವಾಸಿ ಮಂದಿರದ ಕಾಪೌಂಡು  ಕುಸಿದಿದ್ದು, ವಿದ್ಯುತ್ ಕಂಬಗಳ ತೆರವು ಕಾರ್ಯ ನಡೆಯುತ್ತಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

<><><>

ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯ ಶ್ರೀರಾಮದೇವರ ಗುಡ್ಡ ಪಕ್ಕದಲಿದ್ದ ಸುಮಾರು ೨೫ ಸಾವಿರ ಟನ್ ಹಳೇ ಕಸದ ರಾಶಿಯನ್ನು ವೈಜ್ಞಾನಿಕ ವಿಲೇವಾರಿ ಮಾಡುವ ಕಾರ್ಯಕ್ಕೆ ಗುಂಡ್ಲುಪೇಟೆ ಪುರಸಭೆ ಮುಖ್ಯಾಧಿಕಾರಿ ಶರವಣ ಚಾಲನೆ ನೀಡಿದರು. ಬಳಿಕ ಶರವಣ ಮಾತನಾಡಿ,  ಪರಿಸರ ಸಂರಕ್ಷಣೆ ಹಾಗೂ ಸಾರ್ವಜನಿಕ ಆರೋಗ್ಯಕ್ಕೆ ಆದ್ಯತೆ ನೀಡಿ ಕಸವಿಲೇವಾರಿ ಘಟಕದಲ್ಲಿ ದಶಕಗಳಿಂದ ಶೇಖರಣೆಯಾಗಿದ್ದ ಕಸವನ್ನು ಸಂಪೂರ್ಣವಾಗಿ ತೆರವುಗೊಳಿಸುವ

ಕಾರ್ಯಕ್ಕೆ ಚಾಲನೆ ನೀಡಲಾಗಿದೆ ಎಂದು  ತಿಳಿಸಿದರು. ಹಳೇ ಕಸದ ರಾಶಿಯನ್ನು ತೆರವುಗೊಳಿಸುವುದರಿಂದ ಸ್ಥಳೀಯ ಪರಿಸರಕ್ಕೆ ದೊಡ್ಡ ಮಟ್ಟದ ಕೊಡುಗೆ ಸಿಗಲಿದೆ. ಇದರಿಂದ ಅಂತರ್ಜಲ ಹಾಗೂ ಮಣ್ಣಿನ ಮಾಲಿನ್ಯ ತಡೆಗಟ್ಟಬಹುದು. ಗಾಳಿಯ ಗುಣಮಟ್ಟ ಸುಧಾರಿಸಿ, ದುರ್ವಾಸನೆ ಮತ್ತು ನೊಣಗಳ ಕಾಟದಿಂದ ಸ್ಥಳೀಯ ಸಾರ್ವಜನಿಕರಿಗೆ ಮುಕ್ತಿ ಸಿಗಲಿದೆ ಎಂದರು.

<><><><>

ಹಾವೇರಿ ಜಿಲ್ಲೆಯಲ್ಲಿ ಜಾರಿಯಲ್ಲಿರುವ ಬಹುಗ್ರಾಮ ಕುಡಿಯುವ ನೀರು ಯೋಜನೆಗಳ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಗಡುವು ನೀಡಲಾಗಿದ್ದು, ಜುಲೈ ಅಥವಾ ಆಗಸ್ಟ್ ಮೊದಲ ವಾರದಲ್ಲಿ ಯೋಜನೆಯ ಮೊದಲ ಹಂತದಲ್ಲಿ ನೀರು ಸರಬರಾಜು ಶುರುವಾಗಲಿದೆ ಎಂದು ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ದಲ್ಜಿತ್ ಕುಮಾರ್ ಹೇಳಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ  ೧ ಸಾವಿರ ೩೨೫ ಕೋಟಿ ಮೊತ್ತದ ಮೂರು ಬಹುಗ್ರಾಮ ಕುಡಿಯುವ ನೀರು ಯೋಜನೆಯ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>